ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 13 ನೇ ಮಾರ್ಚ್, 2020

ಕೊಡವ ಸಂಸ್ಕೃತಿ ಕಲೆ ಹಾಗೂ ಆಚರಣೆಗಳ ಉಳಿವು ಹಾಗೂ ಪ್ರಗತಿಗಾಗಿ ವಿಶೇಷ ಅನುದಾನ ನೀಡುವ ಕುರಿತು

ಶ್ರೀಮತಿ ಎಸ್.ವೀಣಾ ಅಚ್ಚಯ್ಯ(ವಿಧಾನಸಭೆಯಿಂದ ಚುನಾಯಿತರಾದವರು):-

899 (1108) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ವಿಶ್ವದಲ್ಲೆ ಅತ್ಯಂತ ವಿಶಿಷ್ಠ ಹಾಗೂ ವಿಶೇಷವಾದ ಕಲೆ, ಸಂಸ್ಕೃತಿ ಹಾಗೂ ಆಚಾರ-ವಿಚಾರಗಳನ್ನು ಹೊಂದಿರುವ ಕೊಡವ ಭಾಷೆ ಹಾಗೂ ಸಾಂಸ್ಕೃತಿಕ ವೈಶಿಷ್ಟತೆಗಳ ಉಳಿವು ಹಾಗೂ ಏಳಿಗೆಗಾಗಿ ಸರ್ಕಾರ ರೂಪಿಸಿರುವ ಕಾರ್ಯಕ್ರಮಗಳೇನು ;

(ಆ) ಪ್ರಸಕ್ತ ಆರ್ಥಿಕ ವರ್ಷದಲ್ಲಿ ಈ ಸಂಬಂಧ ಒದಗಿಸಿರುವ ಅನುದಾನವೆಷ್ಟು ;

(ಇ) ಸದರಿ ಅನುದಾನದಲ್ಲಿ ಕೈಗೊಂಡಿರುವ ಕಾರ್ಯಕ್ರಮ, ಯೋಜನೆಗಳ ವಿವರ ನೀಡುವುದು ?